ನಿವೃತ್ತ ಇಂಜಿನಿಯರುಗಳ ಮರು ನೇಮಕಾತಿ

2334 - ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಲೋಕೋಪಯೋಗಿ ಇಲಾಖೆಯಲ್ಲಿ 1995ನೇ ಇಸವಿಯಿಂದ ಇದುವರೆವಿಗೆ ಎಷ್ಟು ಜನ ನಿವೃತ್ತ ಇಂಜಿನಿಯರ್‌ಗಳನ್ನು ಮರು ನೇಮಕ ಮಾಡಿ ಕೊಳ್ಳಲಾಗಿದೆ?*

ಆ) *ಹಾಗಿದ್ದಲ್ಲಿ ಇದಕ್ಕೆ ಕಾರಣಗಳೇನು?*

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಒಂದು

ಆ) ಸಾರ್ವಜನಿಕ ಹಿತದೃಷ್ಟಿಯಿಂದ

ಕಾರ್ಮಿಕರಿಗೆ ನಿವೇಶನ ಮತ್ತು ವಸತಿ ನೀಡಿಕೆ

2336 - ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ) : ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಕಾರ್ಮಿಕರಿಗೆ ಇಲಾಖಾ ವತಿಯಿಂದ ನಿವೇಶನ ಮತ್ತು ವಸತಿ ಕೊಡುವ ಯೋಜನೆ ಸರ್ಕಾರದವರ ಮುಂದಿದೆಯೇ?*

ಆ) *ರಾಜ್ಯದಲ್ಲಿ ಈ ವರ್ಷ ಎಷ್ಟು ಕಾರ್ಮಿಕರಿಗೆ ನಿವೇಶನ ಮತ್ತು ವಸತಿ ಸೌಲಭ್ಯ ಕಲ್ಪಿಸಲಾಗುವುದು?*

ಶ್ರೀ ಸಿದ್ದರಾಮಯ್ಯ (ಉಪಮುಖ್ಯಮಂತ್ರಿಗಳು) :

ಅ) ಇಲ್ಲ

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಇ.ಎಸ್.ಐ. ಆಸ್ಪತ್ರೆಯ ಸಿಬ್ಬಂದಿ ಕೊರತೆ ಬಗ್ಗೆ

2337 - ಶ್ರೀ ಡಿ.ಆರ್. ಪಾಟೀಲ್ (ಗದಗ್) : ಮಾನ್ಯ ಉಪ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿರುವ ಇ.ಎಸ್.ಐ. ಆಸ್ಪತ್ರೆಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)*

ಆ) *ಇ.ಎಸ್.ಐ. ಸೌಲಭ್ಯಕ್ಕೆ ಒಳಗಾದ ಕಾರ್ಮಿಕ ಹಾಗೂ ಸಿಬ್ಬಂದಿ ವರ್ಗ ಸಂಖ್ಯೆ ಎಷ್ಟು?*